ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಭೂ ಸುಧಾರಣೆ ತಿದ್ದುಪಡಿ ವಿಧೇಯಕ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 1/10/2020

# ತಿದ್ದುಪಡಿ ಕಾಯ್ದೆ ಹಿಂಪಡೆಯದಿದ್ದರೆ ಹೋರಾಟ

» ಐಕ್ಯ ಹೋರಾಟ ಸಂಸ್ಥೆ ಎಚ್ಚರಿಕೆ

1-10-2020

**ಬೆಂಗಳೂರು:** ಭೂ ಸುಧಾರಣೆ ಹಾಗೂ ಎಪಿಎಂಸಿ ವಿಧೇಯಕಗಳ ತಿದ್ದುಪಡಿ ನಿರ್ಧಾರದಿಂದ ಸರ್ಕಾರ ಹಿಂದೆ ಸರಿಯದಿದ್ದರೆ ಮುಂದಿನ ದಿನಗಳಲ್ಲಿ ಮತ್ತಷ್ಟು ಉಗ್ರ ಹೋರಾಟ ನಡೆಸಲಾಗುವುದು ಎಂದು ರೈತ, ದಲಿತ ಹಾಗೂ ಕಾರ್ಮಿಕರ ಸಂಘಟನೆಗಳ ಒಳಗೊಂಡ ಐಕ್ಯ ಹೋರಾಟ ಸಂಸ್ಥೆ ಎಚ್ಚರಿಕೆ ನೀಡಿದೆ.

ರೈತರ ಜೀವನ ಭದ್ರತೆ ಆಧಾರವಾಗಿರುವ ಈ ಮಸೂದೆಗಳಿಗೆ ತಿದ್ದುಪಡಿ ತರುವ ಮುನ್ನ ಚರ್ಚೆ ಆಗಬೇಕಿದೆ. ಪ್ರಸಕ್ತ ಸ್ಥಿತಿಗೆ ಅನುಗುಣವಾಗಿ ಅನುಷ್ಠಾನಗೊಳಿಸಲು ಸಿಎಂ ಸಭೆ ಕರೆದರೆ ಸಲಹೆ ಮುಂದಿಡಲಾಗುವುದು ಎಂದು ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.